ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2017-18 ದಿನಾಂಕ: 13-04-2017

## ಪತ್ರಿಕಾ ಆಮಂತ್ರಣ

1. ಕರ್ನಾಟಕ ರಾಜ್ಯ ಅಗ್ನಿಶಾಮಕ ಮತ್ತು ತುರ್ತು ಸೇವೆಗಳು:

ಹುತಾತ್ಮರ ದಿನಾಚರಣೆ:

ಮುಖ್ಯ ಅತಿಥಿಗಳು:

ಡಿ. ಹನುಮಂತು, ಉಪ ನಿರ್ದೇಶಕರು, (ನಿವೃತ್ತ)
ಕರ್ನಾಟಕ ರಾಜ್ಯ ಅಗ್ನಿಶಾಮಕ ಮತ್ತು ತುರ್ತು ಸೇವೆಗಳು

ದಿನಾಂಕ: 14-04-2017 ಶುಕ್ರವಾರ, ಸಮಯ: ಬೆಳಿಗ್ಗೆ 9-00 ಗಂಟೆಗೆ

ಸ್ಥಳ: ಆರ್. ಎ. ಮುಂಡ್ಕುರ್ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಅಕಾಡೆಮಿ, ಬನ್ನೇರುಘಟ್ಟ ರಸ್ತೆ, ಬೆಂಗಳೂರು – 560 029.

2. ಡಾ. ಬಿ.ಆರ್. ಅಂಬೇಡ್ಕರ್ ಅವರ 126 ಜನ್ಮ ದಿನಾಚರಣೆ ಅಂಗವಾಗಿ

ಅಂಬೇಡ್ಕರ್ ಅವರ ಪ್ರತಿಮೆಗೆ ಮಾಲಾರ್ಪಣೆ:
ಸಿದ್ದರಾಮಯ್ಯ, ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ.

ದಿನಾಂಕ: 14-04-2016 ಶುಕ್ರವಾರ, ಸಮಯ: ಬೆಳಿಗ್ಗೆ 9.30 ಗಂಟೆಗೆ
ಸ್ಥಳ: ವಿಧಾನಸೌಧದ ಮುಂಭಾಗ, ಬೆಂಗಳೂರು.

3. 28 ನೇ ಅಖಿಲ ಭಾರತ ಕಿರುಧಾನ್ಯಗಳ ಗುಂಪು ಸಭೆ:

ಮುಖ್ಯ ಅತಿಥಿಗಳು:

ಡಾ. ಎ. ಸೀತಾರಾಮ್, ಕಿರುಧಾನ್ಯ ಯೋಜನೆ ಸಂಯೋಜಕರು, (ನಿವೃತ್ತ), ಭಾರತೀಯ ಕೃಷಿ ಅನುಸಂಧಾನ ಪರಿಷತ್.

ಡಾ. ಡಿ. ಕೆ. ಯಾದವ್, ಸಹಾಯಕ ಮಹಾ ನಿರ್ದೇಶಕರು, ಭಾರತೀಯ ಕೃಷಿ ಅನುಸಂಧಾನ ಪರಿಷತ್. ನವದೆಹಲಿ.
ಡಾ. ವಿ.ಎ. ಟೊನಪ್ಪೆ, ನಿರ್ದೇಶಕರು, ಭಾರತೀಯ ಕಿರುಧಾನ್ಯಗಳ ಸಂಶೋಧನಾ ಸಂಸ್ಥೆ, ಹೈದರಾಬಾದ್.
ಡಾ. ಟಿ.ಎನ್. ಪ್ರಕಾಶ್, ಅಧ್ಯಕ್ಷರು, ಕರ್ನಾಟಕ ಕೃಷಿ ಬೆಲೆ ಆಯೋಗ, ಬೆಂಗಳೂರು

ದಿನಾಂಕ: 14-04-2017 ಶುಕ್ರವಾರ, ಸಮಯ: ಬೆಳಿಗ್ಗೆ 10-00 ಗಂಟೆಗೆ

ಸ್ಥಳ: ಡಾ. ಬಾಬು ಅಂತರರಾಷ್ಟ್ರೀಯ ಸಭಾಂಗಣ, ಗಾಂಧಿ ಕೃಷಿ ವಿಜ್ಞಾನ ಕೇಂದ್ರ, (ಜಿ.ಕೆ.ವಿ.ಕೆ). ಬೆಂಗಳೂರು.

ವಿಶೇಷ ಸೂಚನೆ: ಅಂದು ಬೆಳಿಗ್ಗೆ 9:00 ಗಂಟೆಗೆ ಕಬ್ಬನ್ ಪಾರ್ಕನಲ್ಲಿರುವ ಪ್ರೆಸ್ ಕ್ಲಬ್ ಆವರಣದಿಂದ ಮಾಧ್ಯಮ ಪ್ರತಿನಿಧಿಗಳಿಗೆ ವಾಹನ ವ್ಯವಸ್ಥೆ ಮಾಡಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಡಾ. ಕೆ. ಶಿವರಾಮು, ಮೊಬೈಲ್: 9972035456.

4. ಡಾ. ಬಿ.ಆರ್. ಅಂಬೇಡ್ಕರ್ ಅವರ 126 ಜನ್ಮ ದಿನಾಚರಣೆ ಹಾಗೂ ಪ್ರಶಸ್ತಿ ಪ್ರದಾನ ಸಮಾರಂಭ.

ಉದ್ಘಾಟನೆ:
ಸಿದ್ದರಾಮಯ್ಯ, ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ

ಅಧ್ಯಕ್ಷತೆ:
ಹೆಚ್. ಆಂಜನೇಯ,
ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.

ಉಪನ್ಯಾಸ:
ಪ್ರೊ. ಎಸ್. ಜಿ. ಸಿದ್ದರಾಮಯ್ಯ, ಅಧ್ಯಕ್ಷರು, ಕನ್ನಡ ಅಭಿವೃದ್ಧಿ ಪ್ರಾಧಿಕಾರ
ದಿನಾಂಕ: 14-04-2016 ಶುಕ್ರವಾರ, ಸಮಯ: ಬೆಳಿಗ್ಗೆ 10.00 ಗಂಟೆಗೆ

ಸ್ಥಳ: ಡಾ. ಬಿ.ಆರ್. ಅಂಬೇಡ್ಕರ್ ಭವನ, ಮಿಲ್ಲರ್ಸ್ ರಸ್ತೆ, ವಸಂತ ನಗರ, ಬೆಂಗಳೂರು.

5. <u>100ನೇ ಡಿಜಿಧನ್ ಮೇಳ:</u>

ದಿನಾಂಕ: 14–04–2017 ಶುಕ್ರವಾರ ಸಮಯ: ಮಧ್ಯಾಹ್ನ 12.00 ಗಂಟೆಗೆ

ಸ್ಥಳ: ಕೊಠಡಿ ಸಂಖ್ಯೆ 419, ವಿಕಾಸಸೌಧ, ಡಾ. ಅಂಬೇಡ್ಕರ್ ವೀಧಿ, ಬೆಂಗಳೂರು.

6. ಬೆಂಗಳೂರು ಡಾ, ಬಿ.ಆರ್. ಅಂಬೇಡ್ಕರ್ ಸ್ಕೂಲ್ ಆಫ್ ಎಕಾನಾಮಿಕ್ಸ್ ಶಂಕುಸ್ಥಾಪನೆ ಸಮಾರಂಭ.

<u>ಶಂಕುಸ್ಥಾಪನೆ ನೆರವೇರಿಸುವವರು:</u>
ಶ್ರೀ ಪ್ರಣಬ್ ಮುಖರ್ಜಿ, ಸನ್ಮಾನ್ಯ ಭಾರತದ ರಾಷ್ಟ್ರಪತಿಗಳು.

ಘನ ಉಪಸ್ಥಿತಿ:
ವಜುಬಾಯಿ ರೂಢಾಬಾಯಿ ವಾಲಾ,
ರಾಜ್ಯಪಾಲರು, ಕರ್ನಾಟಕ ಸರ್ಕಾರ.
ಮತ್ತು
ಸಿದ್ದರಾಮಯ್ಯ, ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ.

ದಿನಾಂಕ: 14–04–2017 ಶುಕ್ರವಾರ ಸಮಯ: ಮಧ್ಯಾಹ್ನ 1.30 ಗಂಟೆಗೆ

ಸ್ಥಳ: ಬ್ಯಾಂಕ್ವೆಟ್ ಹಾಲ್, ವಿಧಾನಸೌಧ, ಬೆಂಗಳ್ರರು

7. ಕರ್ನಾಟಕ ಚಲನಚಿತ್ರ ಅಕಾಡೆಮಿ ವತಿಯಿಂದ 64 ನೇ ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿ ಪುರಸ್ಕೃತರಿಗೆ ಅಭಿನಂದನೆ:

<u>ಅಂದು ನಮ್ಮೊಂದಿಗೆ:</u>

ಮುನಿರತ್ನಂ,

ಶಾಸಕರು, ರಾಜರಾಜೇಶ್ವರಿ ವಿಧಾನಸಭಾ ಕ್ಷೇತ್ರ ಹಾಗೂ ಅಧ್ಯಕ್ಷರು,
ಕನ್ನಡ ಚಲನಚಿತ್ರ ನಿರ್ಮಾಪಕರ ಸಂಘ.

ಎನ್.ಆರ್. ವಿಶುಕುಮಾರ್,
ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ಸಾ.ರಾ. ಗೋವಿಂದು,
ಅಧ್ಯಕ್ಷರು, ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ.

ಎಂ.ಎಸ್. ರಮೇಶ್, ಅಧ್ಯಕ್ಷರು, ಕರ್ನಾಟಕ ಚಲನಚಿತ್ರ ನಿರ್ದೇಶಕರ ಸಂಘ

ಅಧ್ಯಕ್ಷತೆ:
ಎಸ್. ವಿ. ರಾಜೇಂದ್ರಸಿಂಗ್ ಬಾಬು,
ಅಧ್ಯಕ್ಷರು, ಕರ್ನಾಟಕ ಚಲನಚಿತ್ರ ಅಕಾಡೆಮಿ.

**ದಿನಾಂಕ: 15–04–2017 ಶನಿವಾರ, ಸಮಯ : ಸಂಜೆ 6–00 ಗಂಟೆಗೆ**

ಸ್ಥಳ: ಮಹದೇವ ದೇಸಾಯಿ ಸಭಾಂಗಣ, ಗಾಂಧಿ ಭವನ, ಬೆಂಗಳೂರು.

## ಪತ್ರಿಕಾ ಪ್ರಕಟಣೆ

## ಉತ್ತರಾಧಿಕರಣ ಪ್ರಮಾಣ ಪತ್ರವನ್ನು ನೀಡಲು ಕೊನೆಯ ಅವಕಾಶ

ಬೆಂಗಳೂರು, ಏಪ್ರಿಲ್ 13 (ಕರ್ನಾಟಕ ವಾರ್ತೆ)

ಸಾರ್ವಜನಿಕ ಗ್ರಂಥಾಲಯ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದ ದಿ. ವೈ.ಎನ್. ಸರೋಜ, ಕಡ್ಡಾಯ ನಿವೃತ್ತಿಗೊಳಿಸಲಾದ ಗ್ರಂಥಾಲಯ ಸಹಾಯಕರು, ಇವರ ಅರ್ಹ ವಾರಸುದಾರರೆನ್ನಲಾದ ಸುಧೀರ್ ಕಶ್ಯಪ್ ಅವರು ಸದರಿ ನೌಕರರ ಅವಲಂಬಿತರೆನ್ನುವ ಬಗ್ಗೆ ಹಾಗೂ ವಾರಸುದಾರರೆನ್ನುವ ಬಗ್ಗೆ ಸಕ್ಷಮ ಪ್ರಾಧಿಕಾರದಿಂದ ಉತ್ತರಾಧಿಕರಣ ಪ್ರಮಾಣ ಪತ್ರವನ್ನು ಪಡೆದು ಸಾರ್ವಜನಿಕ ಗ್ರಂಥಾಲಯ ಇಲಾಖೆಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ಸಲ್ಲಿಸಲು ಕೊನೆಯ ಅವಕಾಶವನ್ನು ನೀಡಿದೆ.

ಏಪ್ರಿಲ್ 2017ನೇ ತಿಂಗಳೊಳಗಾಗಿ ಸುಧೀರ್ ಕಶ್ಯಪ್ ಅವರು ಅಗತ್ಯ ದಾಖಲಾತಿಗಳೊಂದಿಗೆ ಕಚೇರಿಯನ್ನು ಸಂಪರ್ಕಿಸದಿದ್ದಲ್ಲಿ ನಿಯಮಾನುಸಾರ ದೊರೆಯುವ ನಿವೃತ್ತ ಸೌಲಭ್ಯಗಳ ಬಗೆಗಿನ ಕಡತವನ್ನು ಅವರ ಜವಾಬ್ದಾರಿ ಮೇಲೆ ಅಂತಿಮಗೊಳಿಸಿ ವಿಲೇ ಮಾಡಲಾಗುವುದೆಂದು ಪ್ರಕಟಣೆ ತಿಳಿಸಿದೆ.

:ಜೆಡಿ:ಜಿಪಿಆರ್

# 5 Days Free Course

**Bengaluru, April 13, (Karnataka Information)**

**The Mysuru Horticultural Society will be conducting a free training classes on "THAI ART" arrangement. The classes will be commencing from April 17th 2017 at 11.00 AM at Dr M.H. Marigowda Memorial Hall, Lalbagh, Bengaluru.**

**For particulars contact the Secretary, Mysuru Horticultural Society, Lalbagh, Bengaluru – 4 (Phone No: 26576781-9886424999).**

:ಜೆಡಿ:ಜಿಪಿಆರ್

# ನೇಕಾರ ಕಾರ್ಮಿಕರ ಗಣತಿ ಹಾಗೂ ಗುರುತಿನ ಚೀಟಿ ಕಾರ್ಯಕ್ರಮ – ಸೂಕ್ತ ಮಾಹಿತಿ ನೀಡಲು ಕೋರಿಕೆ

ಬೆಂಗಳೂರು, ಏಪ್ರಿಲ್ 13 (ಕರ್ನಾಟಕ ವಾರ್ತೆ)

ಭಾರತ ಸರ್ಕಾರದ ಜವಳಿ ಮಂತ್ರಾಲಯವು ದೇಶದಾದ್ಯಂತ 4ನೇ ಕೈಮಗ್ಗ ಹಾಗೂ ಕೈಮಗ್ಗ ಸಂಬಂಧಿತ ಕಾರ್ಮಿಕರ ಗಣತಿ ಹಾಗೂ ಫೋಟೋ ಗುರುತಿನ ಚೀಟಿ ನೀಡುವ ಕಾರ್ಯಕ್ರಮವು ಏಪ್ರಿಲ್ ಮಾಹೆಯಿಂದ ಹಮ್ಮಿಕೊಳ್ಳಲಾಗಿದೆ.

ಈ ಗಣತಿ ಕಾರ್ಯವನ್ನು ಮೇ: ಕಾರ್ವಿ ಡೇಟಾ ಮ್ಯಾನೇಜ್‌ಮೆಂಟ್ ಏಜೆನ್ಸಿ ಅವರಿಗೆ ವಹಿಸಲಾಗಿದೆ. ನೇಕಾರರು ಇದರ ಸದುಪಯೋಗ ಪಡೆಯಲು ಸದರಿ ಸಂಸ್ಥೆಯವರು ತಮ್ಮ ಪ್ರದೇಶಕ್ಕೆ ಭೇಟಿಕೊಟ್ಟಾಗ ಸ್ಥಳೀಯವಾಗಿ ಲಭ್ಯವಿದ್ದು, ಅವರಿಗೆ ಸೂಕ್ತ ಮಾಹಿತಿ ಒದಗಿಸಲು ಕೋರಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲೆಯ ಉಪ/ಸಹಾಯಕ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ, ಜಿಲ್ಲಾ ಪಂಚಾಯತ್ ಇವರನ್ನು ಸಂಪರ್ಕಿಸಬಹುದಾಗಿದೆ.

:ಜೆಡಿ:ಜಿಪಿಆರ್

# ಬಾಲಭವನದಿಂದ ಬೇಸಿಗೆ ಶಿಬಿರ

ಬೆಂಗಳೂರು, ಏಪ್ರಿಲ್ 13 (ಕರ್ನಾಟಕ ವಾರ್ತೆ)

ಬೆಂಗಳೂರು ನಗರದಲ್ಲಿರುವ ಬಾಲಭವನ, ಕಬ್ಬನ್‌ಪಾರ್ಕ್, ವತಿಯಿಂದ ಏಪ್ರಿಲ್ 17 ರಿಂದ ಮೇ 14 ರವರೆಗೆ ಬೇಸಿಗೆ ರಜೆ ಅಂಗವಾಗಿ 5 ರಿಂದ 16 ವರ್ಷದ ಮಕ್ಕಳಿಗೆ ಬೇಸಿಗೆ ಶಿಬಿರವನ್ನು ಹಮ್ಮಿಕೊಂಡಿದೆ.

ಬೇಸಿಗೆ ಶಿಬಿರವನ್ನು ಸೃಜನಾತ್ಮಕ ಮತ್ತು ಕ್ರಿಯಾತ್ಮಕ ಚಟುವಟಿಕೆಗಳಾದ ಚಿತ್ರಕಲೆ, ಕರಕುಶಲೆ, ಎಂಬ್ರಾಯಿಡರಿ, ಸಂಗೀತ, ನೃತ್ಯ, ಜೇಡಿಮಣ್ಣಿನ ಕಲೆ ಕರಾಟೆ, ಯೋಗ, ಕೀಬೋರ್ಡ್, ತಲಬ, ಯೋಗ, ಕಸದಿಂದ ರಸ, ಮೆಹಂದಿ, ಕ್ಯಾಲಿಗ್ರಾಫಿ, ಟ್ರೆಡಿಷನಲ್ ಆರ್ಟ್, ಅಲ್ಯೂಮಿನಿಯಂ ಫಾಯಿಲ್ ವರ್ಕ್ಸ್, ವುಡ್ ವರ್ಕ್, ಏರೋ ಮಾಡಲಿಂಗ್, ರಂಗ ತರಬೇತಿ, ಫೋಟೋಗ್ರಾಫಿ ಇತ್ಯಾದಿ ಕಲಾ ಕ್ಷೇತ್ರಗಳಲ್ಲಿ ಅನುಭವ ಹೊಂದಿರುವ ಅರ್ಹ ಕಲಾ ಬೋಧಕರಿಂದ ತರಬೇತಿ ನೀಡಲಾಗುತ್ತದೆ.

ಶಿಬಿರವನ್ನು ಕೇಂದ್ರ ಬಾಲಭವನ, ಕಬ್ಬನ್ ಉದ್ಯಾನವನ ಹಾಗೂ ಜಯನಗರ, ರಾಜಾಜಿನಗರ, ಕೋಲ್ಸ್ ಪಾರ್ಕ್, ಜೀವನ್ ಭೀಮಾನಗರ ಮಿನಿ ಬಾಲ ಭವನಗಳಲ್ಲಿ ಹಮ್ಮಿಕೊಂಡಿರುವ ಶಿಬಿರಕ್ಕೆ ಏಪ್ರಿಲ್ 8 ರಿಂದ ಅರ್ಜಿಗಳನ್ನು ಬೆಳಿಗ್ಗೆ 11.00 ರಿಂದ 5.00 ಗಂಟೆವರೆಗೆ (ಬಾಲಭವನದ ರಜಾ ದಿನಗಳನ್ನು ಹೊರತುಪಡಿಸಿ) ಕೇಂದ್ರ ಬಾಲಭವನ, ಕಬ್ಬನ್ ಉದ್ಯಾನವನ, ಬೆಂಗಳೂರು ಇಲ್ಲಿ ಮೊದಲು ಬಂದವರಿಗೆ ಮೊದಲ ಆದ್ಯತೆ ಮೇಲೆ ನೀಡಲಾಗುವುದು.

ಆಸಕ್ತರು ಹೆಚ್ಚಿನ ಮಾಹಿತಿಗಾಗಿ ಹಾಗೂ ನೊಂದಣಿಗಾಗಿ ಕಾರ್ಯದರ್ಶಿಗಳು, ಬಾಲಭವನ ಸೊಸೈಟಿ, ಉದ್ಯಾನವನ, ಬೆಂಗಳೂರು, ಇಲ್ಲಿ ಖುದ್ದಾಗಿ ಅಥವಾ ದೂರವಾಣಿ ಸಂ. 080 – 22864189/22861423 ರ ಮೂಲಕ ಸಂಪರ್ಕಿಸಲು ಕೋರಿದೆ.

:ಜೆಡಿ:ಜಿಪಿಆರ್

## ಅಗ್ನಿಶಾಮಕ ಸೇವಾ ದಿನಾಚರಣೆ ಕಾರ್ಯಕ್ರಮ

ಬೆಂಗಳೂರು, ಏಪ್ರಿಲ್ 12 (ಕರ್ನಾಟಕ ವಾರ್ತೆ)

14ನೇ ಏಪ್ರಿಲ್ – 1944 ರಂದು ಮುಂಬೈ ಬಂದರಿನ ವಿಕ್ಟೋರಿಯಾ ಡಾಕ್‌ನಲ್ಲಿ ಸ್ಫೋಟಕ ವಸ್ತುಗಳನ್ನು ಸಾಗಿಸುತ್ತಿದ್ದ "ಎಸ್.ಎಸ್. ಪೋರ್ಟ್ ಸ್ಟೈಕೈನ್" ಎಂಬ ಹಡಗು ಘೋರ ಅಗ್ನಿ ಅನಾಹುತಕ್ಕೆ ಒಳಗಾಗಿದ್ದು, ಆ ಬೆಂಕಿಯನ್ನು ನಂದಿಸಲು ಮುಂಬೈ ಫೈರ್ ಬ್ರಿಗೇಡ್‌ನ ಅಧಿಕಾರಿ/ಸಿಬ್ಬಂದಿಯವರು ಕಾರ್ಯನಿರತರಾಗಿದ್ದ ಸಂದರ್ಭದಲ್ಲಿ ಹಡಗು ಸ್ಫೋಟಗೊಂಡು 66 ಜನ ಅಧಿಕಾರಿ ಮತ್ತು ಸಿಬ್ಬಂದಿಗಳು ವೀರ ಮರಣ ಹೊಂದಿದರು. ಈ ಹುತಾತ್ಮರ ನೆನಪಿಗಾಗಿ ಏಪ್ರಿಲ್ –14 ರಂದು ಹುತಾತ್ಮರ ದಿನಾಚರಣೆಯನ್ನಾಗಿ ಆಚರಿಸಲಾಗುತ್ತಿದೆ.

ಪ್ರತಿ ವರ್ಷ ಏಪ್ರಿಲ್ –14 ರಿಂದ 20 ರವರೆಗಿನ ಸಪ್ತಾಹವನ್ನು ದೇಶದಾದ್ಯಂತ ಅಗ್ನಿಶಾಮಕ ಸೇವಾ ಸಪ್ತಾಹವನ್ನಾಗಿ ಆಚರಿಸಲಾಗುತ್ತಿದೆ. ಈ ಸಪ್ತಾಹದಲ್ಲಿ ಸಾರ್ವಜನಿಕರಿಗೆ ಅಗ್ನಿ ಸುರಕ್ಷತೆಯ ಬಗ್ಗೆ ತಿಳುವಳಿಕೆಯನ್ನು ನೀಡಿ, ಅಗ್ನಿಶಮನ ವಿಚಾರಗಳ ಬಗ್ಗೆ ಅಣಕು ಪ್ರದರ್ಶನಗಳನ್ನು ಆಯೋಜಿಸಲಾಗುತ್ತಿದೆ. ದೇಶದಾದ್ಯಂತ ಸಪ್ತಾಹದ ಮೊದಲ ದಿನವಾದ ಏಪ್ರಿಲ್ – 14 ರಂದು ಸಾರ್ವಜನಿಕರ ಪ್ರಾಣ ಮತ್ತು ಆಸ್ತಿ ರಕ್ಷಣಾ ಕಾರ್ಯದಲ್ಲಿ ತಮ್ಮ ಪ್ರಾಣವನ್ನು ಬಲಿದಾನಗೈದು ಅಮರರಾದ ವೀರ ಅಗ್ನಿಶಾಮಕರಿಗೆ ಶ್ರದ್ಧಾಂಜಲಿಯನ್ನು ಅರ್ಪಿಸಲಾಗುತ್ತಿದೆ.

ಕರ್ನಾಟಕ ರಾಜ್ಯ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಇಲಾಖೆ ವತಿಯಿಂದ ಏಪ್ರಿಲ್ 14 ರಂದು ಬೆಳಿಗ್ಗೆ 9.00 ಗಂಟೆಗೆ ನಗರದ ಬನ್ನೇರುಘಟ್ಟ ರಸ್ತೆಯಲ್ಲಿರುವ ಆರ್.

ಎ. ಮುಂಡ್ಕುರ್ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಅಕಾಡೆಮಿಯ ಆವರಣದಲ್ಲಿ ಹುತಾತ್ಮರ ದಿನಾಚರಣೆಯನ್ನು ಹಮ್ಮಿಕೊಂಡಿದೆ.

ಸಮಾರಂಭದ ಮುಖ್ಯ ಅತಿಥಿಯಾಗಿ ಕರ್ನಾಟಕ ರಾಜ್ಯ ಅಗ್ನಿಶಾಮಕ ಮತ್ತು ತುರ್ತು ಸೇವೆಗಳು ನಿವೃತ್ತ ಉಪ ನಿರ್ದೇಶಕ ಡಿ. ಹನುಮಂತು ಅವರು ಪಾಲ್ಗೊಳ್ಳಲಿದ್ದಾರೆ.

:ಜೆಡಿ:ಜಿಪಿಆರ್

## ಮಕ್ಕಳ ಕಲ್ಯಾಣ ಸಮಿತಿ ಸದಸ್ಯರುಗಳಿಗಾಗಿ ಅರ್ಜಿ ಆಹ್ವಾನ

ಬೆಂಗಳೂರು, ಏಪ್ರಿಲ್ 13 (ಕರ್ನಾಟಕ ವಾರ್ತೆ)

ಕರ್ನಾಟಕ ರಾಜ್ಯ ಸಮಗ್ರ ಮಕ್ಕಳ ರಕ್ಷಣಾ ಸೊಸೈಟಿ ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ) ಕಾಯ್ದೆ 2015 ಹಾಗೂ ಬಾಲನ್ಯಾಯ ಮಾದರಿ ನಿಯಮ 2016 ರನ್ವಯ ಪ್ರತಿ ಜಿಲ್ಲೆಯಲ್ಲಿ ಮಕ್ಕಳ ಕಲ್ಯಾಣ ಸಮಿತಿ ಮತ್ತು ಬಾಲನ್ಯಾಯ ಮಂಡಳಿಗಳನ್ನು ರಚಿಸಲು ಆಸಕ್ತರಿಂದ ಸದಸ್ಯತ್ವಕ್ಕಾಗಿ ಅರ್ಜಿಗಳನ್ನು ಆಹ್ವಾನಿಸಿದೆ.

ಮಕ್ಕಳ ಕಲ್ಯಾಣ ಸಮಿತಿಗಳು ಮತ್ತು ಬಾಲನ್ಯಾಯ ಮಂಡಳಿಗಳಿಗೆ 2017 ರಿಂದ 2020 ರವರೆಗೆ ಮೂರು ವರ್ಷಗಳ ಕಾಲಾವಧಿಗಾಗಿ ಸದಸ್ಯತ್ವಕ್ಕಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿ ನಮೂನೆ, ಸೂಚನೆಗಳು ಹಾಗೂ ಹೆಚ್ಚಿನ ಮಾಹಿತಿಗಾಗಿ ಇಲಾಖೆಯ ವೆಬ್‌ಸೈಟ್ dwcdkar.gov.in ಅನ್ನು ವೀಕ್ಷಿಸಬಹುದಾಗಿದೆ.

ಮಕ್ಕಳ ಕಲ್ಯಾಣ ಸಮಿತಿ ಮತ್ತು ಬಾಲನ್ಯಾಯ ಮಂಡಲಿಗಳಿಗೆ ಪ್ರತ್ಯೇಕ ಅರ್ಜಿಗಳನ್ನು ಸಲ್ಲಿಸುವುದು. ಭರ್ತಿಮಾಡಿದ ಅರ್ಜಿಗಳನ್ನು ನೋಂದಾಯಿತಿ ಅಂಚೆ ಮೂಲಕ ಅಥವಾ ಮುದ್ದಾಂ ದಿನಾಂಕ : 15–05–2017 ರಂದು ಸಂಜೆ 5.30 ರ ಒಳಗೆ ಸದಸ್ಯ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಸಮಗ್ರ ಮಕ್ಕಳ ರಕ್ಷಣಾ ಸೊಸೈಟಿ, ಕೇರಾಫ್, ನಿರ್ದೇಶಕರ ಕಚೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಮೊದಲನೇ ಮಹಡಿ, ಬಹುಮಹಡಿಗಳ ಕಟ್ಟದ, ಡಾ. ಬಿ.ಆರ್. ಅಂಬೇಡ್ಕರ್ ವೀಧಿ, ಬೆಂಗಳೂರು – 560 001 ಇವರಿಗೆ ಸಲ್ಲಿಸುವುದು.

ಹೆಚ್ಚಿನ ಮಾಹಿತಿಗಾಗಿ ಹಾಘೂ ಅರ್ಜಿ ನಮೂನೆಗಾಗಿ (ಅರ್ಜಿ ನಮೂನೆಯು 4 ಪುಟ ಒಳಗೊಂಡಿದೆ) ಸದಸ್ಯ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಮಕ್ಕಳ ರಕ್ಷಣಾ ಸೊಸೈಟಿ, ಬೆಂಗಳೂರು ದೂರವಾಣಿ : 080–22879381/82 ಹಾಗೂ ಆಯಾ ಜಿಲ್ಲೆಯ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳ ಕಚೇರಿಯನ್ನು ಸಂಪರ್ಕಿಸುವುದು. (ವಿವರಗಳು ಇಲಾಖೆಯ ವೆಬ್‌ಸೈಟ್ dwcdkar.gov.in ನಲ್ಲಿ ಲಭ್ಯವಿರುತ್ತದೆ.)

:ಜೆಡಿ:ಜಿಪಿಆರ್

## ಕಬ್ಬನ್‌ಪಾರ್ಕ್‌ನಲ್ಲಿ ಈ ಭಾನುವಾರ

ಬೆಂಗಳೂರು, ಏಪ್ರಿಲ್ 13 (ಕರ್ನಾಟಕ ವಾರ್ತೆ)

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. **ದಿನಾಂಕ: 16–04–2017**ರ ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1) ಬೆಳಿಗ್ಗೆ 06.00 ಗಂಟೆಯಿಂದ ಬೆಳಿಗ್ಗೆ 07.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ **"ಉದ್ಯಾನವನದಲ್ಲಿ ಉದಯರಾಗ"** ಎಂಬ **ಶೀರ್ಷಿಕೆಯಡಿ ಶ್ರೀ.ಮೋಹನ ದೇವಯ್ಯ ಮತ್ತು ತಂಡ, ಮೈಸೂರು ರವರಿಂದ ಸುಗಮ ಸಂಗೀತ** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

2) ಸಂಜೆ 05.00 ಗಂಟೆಯಿಂದ ಸಂಜೆ 06.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ **"ಉದ್ಯಾನವನದಲ್ಲಿ ಸಂಧ್ಯಾರಾಗ"** ಎಂಬ **ಶೀರ್ಷಿಕೆಯಡಿ ಶ್ರೀ. ವಿ.ರಾಜೇಶ್ ಮತ್ತು ತಂಡ, ಆನೇಕಲ್ ರವರಿಂದ ಸುಗಮ ಸಂಗೀತ** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

3) ಬೆಳಿಗ್ಗೆ 8.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ **ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು** ಏರ್ಪಡಿಸಲಾಗಿದೆ.

4) ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ **ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ** ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

**ಈ ಭಾನುವಾರದ ವಿಶೇಷ ಕಾರ್ಯಕ್ರಮಗಳು:**

**I.ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ**

- ಬೆಳಿಗ್ಗೆ 7.00 ಗಂಟೆಯಿಂದ 8.00 ಗಂಟೆಯವರೆಗೆ **ಯೂನಿವರ್ಸ್ ಆರ್ಟ್ ಫೌಂಡೇಶನ್** ಸಂಸ್ಥೆಯ ಸಹಯೋಗದೊಂದಿಗೆ **ಕು:ನಿಖಿತ ನಂಬಿಯಾರ್ ರವರಿಂದ ಭರತನಾಟ್ಯ** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

- ಬೆಳಿಗ್ಗೆ 8.00 ಗಂಟೆಯಿಂದ 9.00 ಗಂಟೆಯವರೆಗೆ **ಶ್ರೀವಾಣಿ ವಿದ್ಯಾ ಕೇಂದ್ರ, ಮಾಚೋಹಳ್ಳಿ, ಬೆಂಗಳೂರು** ರವರ ಮಕ್ಕಳಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

**II.ಸ್ಥಳ: ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಹತ್ತಿರ**

- **ಬೆಳಿಗ್ಗೆ 7.00 ರಿಂದ ಬೆಳಿಗ್ಗೆ 10.00 ಘಂಟೆಯವರೆಗೆ Tathagat Heart Care Center, Mallige Medical Center Premises, Crescent Road, Bangalore-01 ರವರ ವತಿಯಿಂದ ಸಾರ್ವಜನಿಕರಿಗೆ ಉಚಿತವಾಗಿ ಆರೋಗ್ಯ ತಪಾಸಣಾ ಶಿಬಿರ ಮತ್ತು ಆರೋಗ್ಯದ ಕುರಿತು ಅರಿವು ಮೂಡಿಸುವ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.**

- **ಕೃಷಿ ಇಲಾಖೆವತಿಯಿಂದ ಬೆಳಿಗ್ಗೆ 7.00 ರಿಂದ ಬೆಳಿಗ್ಗೆ 10.00 ಘಂಟೆಯವರೆಗೆ ಸಿರಿಧಾನ್ಯಗಳಿಗಾಗಿ ಓಟ** ಎಂಬ ಮ್ಯಾರಥಾನ್ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು, ಸಿರಿಧಾನ್ಯಗಳ ಮಾರಾಟಕ್ಕಾಗಿ ಮಳಿಗೆಗಳನ್ನು ತೆರೆಯಲಾಗಿರುವುದು.

## ಮೂಲ ದಾಖಲೆ ಪರಿಶೀಲನೆ

ಬೆಂಗಳೂರು, ಏಪ್ರಿಲ್ 13 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕ ಸೇವಾ ಆಯೋಗ ಕೈಮಗ್ಗ ಮತ್ತು ಜವಳಿ ಇಲಾಖೆಯಲ್ಲಿನ ಸಹಾಯಕ ನಿರ್ದೇಶಕರು ಮತ್ತು ಜವಳಿ ಪ್ರವರ್ಧನಾಧಿಕಾರಿ ಹುದ್ದೆಗಳಿಗೆ ಅರ್ಹರಾದ ಅಭ್ಯರ್ಥಿಗಳ ಮೂಲ ದಾಖಲೆಗಳ ಪರಿಶೀಲನೆಯನ್ನು ದಿನಾಂಕ: 22-4-2017 ರಂದು ಬೆಳಿಗ್ಗೆ 9-30 ಗಂಟೆಗೆ ಆಯೋಗದ ಕೇಂದ್ರ ಕಚೇರಿ, ಬೆಂಗಳೂರು ಇಲ್ಲಿ ನಡೆಸಲಿದೆ.

ಅರ್ಹ ಅಭ್ಯರ್ಥಿಗಳ ಅರ್ಹತಾ ಪಟ್ಟಿಯನ್ನು ಆಯೋಗದ ವೈಬ್‌ಸೈಟ್ "http:kpsc.kar.nic.in" ರಲ್ಲಿ ಪ್ರಕಟಿಸಲಾಗಿದೆ. ಅಭ್ಯರ್ಥಿಗಳು ಸೂಚನಾ ಪತ್ರಗಳನ್ನು ಆಯೋಗದ ಅಂತರ್ಜಾಲದಿಂದ ದಿನಾಂಕ 13-4-2017 ರಿಂದ ಡೌನ್‌ಲೋಡ್ ಮಾಡಿಕೊಳ್ಳುವಂತೆಯು ಹಾಗೂ ಸೂಚನಾ ಪತ್ರವನ್ನು ಡೌನ್‌ಲೋಡ್ ಮಾಡಿಕೊಳ್ಳಲು ತಾಂತ್ರಿಕ ಸಮಸ್ಯೆಗಳು ಉಂಟಾದಲ್ಲಿ ಹೆಲ್ಪ್‌ಲೈನ್ ಸಂಖ್ಯೆ 7337830894 ನ್ನು ಸಂಪರ್ಕಿಸಬಹುದು.

## ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿ ಪುರಸ್ಕೃತರಿಗೆ ಅಭಿನಂದನಾ ಸಮಾರಂಭ

ಬೆಂಗಳೂರು, ಏಪ್ರಿಲ್ 13 (ಕರ್ನಾಟಕ ವಾರ್ತೆ)

ಕರ್ನಾಟಕ ಚಲನಚಿತ್ರ ಅಕಾಡೆಮಿ ವತಿಯಿಂದ ಪದ್ಮಶ್ರೀ ಪುರಸ್ಕೃತ ಖ್ಯಾತ ಕಲಾವಿದೆ ಡಾ: ಭಾರತಿ ವಿಷ್ಣುವರ್ಧನ್ ಹಾಗೂ 64 ನೇ ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿ ಪುರಸ್ಕೃತರಿಗೆ ಅಭಿನಂದನಾ ಸಮಾರಂಭವನ್ನು ಹಮ್ಮಿಕೊಂಡಿದೆ.

ಸಮಾರಂಭ ಏಪ್ರಿಲ್ 15 ರಂದು ಸಂಜೆ 6-00 ಗಂಟೆಗೆ ಮಹದೇವ ದೇಸಾಯಿ ಸಭಾಂಗಣ, ಗಾಂದಿ ಭವನ, ಬೆಂಗಳೂರು ಇಲ್ಲಿ ಜರುಗಲಿದೆ.

ಪ್ರಶಸ್ತಿ ಪುರಸ್ಕೃತರಾದ ಮಾಸ್ಟರ್ ಮನೋಹರ್. ಕೆ. (ಶ್ರೇಷ್ಠ ಬಾಲನಟ) ಚಿತ್ರ ರೈಲ್ವೆ ಚಿಲ್ಡ್ರನ್, ಎನ್.ಕೆ. ರಾಮಕೃಷ್ಣ, ಶ್ರೇಷ್ಠ ಪ್ರಸಾಧನಕಾರ, ಚಿತ್ರ (ಅಲ್ಲಮ), ಬಾಪು ಪದ್ಮನಾಭ, ಶ್ರೇಷ್ಠ ಸಂಗೀತ ಸಂಯೋಜಕ- ಹಾಡುಗಳು ಮತ್ತು ಹಿನ್ನಲೆ ಸಂಗೀತ (ಚಿತ್ರ ಅಲ್ಲಮ), ನಿಖಿಲ್ ಮಂಜು, ನಿರ್ದೇಶಕರು, ಶ್ರೇಷ್ಠ ಕನ್ನಡ ಪ್ರಾದೇಶಿಕ ಚಲನಚಿತ್ರ ರಿಸರ್ವೆಷನ್. ಯಾಕೂಬ್ ಖಾದರ್ ಗುಲ್ವಾಡಿ, ನಿರ್ಮಾಪಕರು, ಶ್ರೇಷ್ಠ ಪ್ರಾದೇಶಿಕ ತುಳು ಚಿತ್ರ ಮದಿಪು, ಚೇತನ್ ಮುಂಡಾಡಿ, ನಿರ್ದೇಶಕರು, ಸಂದೀಪ್ ಕುಮಾರ್ ನಂದಳಿಕೆ ನಿರ್ಮಾಪಕರು ಇವರನ್ನು ಅಭಿನಂದಿಸಲಾಗುವುದು.

ಸಮಾರಂಭದಲ್ಲಿ ಮುನಿರತ್ನ, ಶಾಸಕ ಹಾಗೂ ಅಧ್ಯಕ್ಷರು, ಕನ್ನಡ ಚಲನಚಿತ್ರ ನಿರ್ಮಾಪಕರ ಸಂಘ, ಎನ್.ಆರ್. ವಿಶುಕುಮಾರ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ನಿರ್ದೇಶಕರು, ಸಾ. ರಾ ಗೋವಿಂದು, ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ ಅಧ್ಯಕ್ಷರು, ಎಂ.ಎಸ್. ರಮೇಶ್, ಕರ್ನಾಟಕ ಚಲನಚಿತ್ರ ನಿರ್ದೇಶಕರ ಸಂಘದ

ಅಧ್ಯಕ್ಷರು, ಎಸ್.ವಿ. ರಾಜೇಂದ್ರಸಿಂಗ್ ಬಾಬು, ಕರ್ನಾಟಕ ಚಲನಚಿತ್ರ ಅಕಾಡೆಮಿ ಅಧ್ಯಕ್ಷರು ಭಾಗವಹಿಸುವರು.